ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 13/10/20

# ಹಿರಿಯ ನಾಗರಿಕರಿಗೆ ಅಂಚೆ ಮತಪತ್ರ ವಿತರಣೆ

ವಿ.ವಾ. 13-10-2020



ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬಿಎಲ್‌ಒಗಳ ಮೂಲಕ ಹಿರಿಯ ನಾಗರಿಕರಿಗೆ ನಮೂನೆ 12ಡಿ ಅರ್ಜಿ ವಿತರಿಸಲಾಯಿತು.

**ಯಶವಂತಪುರ:** ನ.3ರಂದು ನಡೆಯಲಿರುವ ಆರ್.ಆರ್.ನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಮತದಾರರ ಪಟ್ಟಿಯಲ್ಲಿರುವ 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ಅಂಗವಿಕಲರಿಗೆ ಅವರ ಮನೆಬಾಗಿಲಿನಲ್ಲೇ ಮತ ಚಲಾಯಿಸಲು ಅನುಕೂಲವಾಗುವಂತೆ ಅಂಚೆ ಮತಪತ್ರ ನೀಡಲು ಹಾಗೂ ಚಲಾಯಿಸಿದ ಮತಪತ್ರಗಳನ್ನು ಸಂಗ್ರಹಿಸಲು ಕ್ರಮ ವಹಿಸಲಾಗುತ್ತಿದೆ.

**» ಕೋವಿಡ್ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಕ್ರಮ**

ಬಿಎಲ್‌ಒಗಳ ಮೂಲಕ ನಮೂನೆ 12ಡಿ ಅರ್ಜಿಯನ್ನು ಅರ್ಹರ ಮನೆಬಾಗಿಲಿಗೆ ತಲುಪಿಸಲಾಗುತ್ತಿದೆ. ಕೋವಿಡ್ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ನೀಡಿರುವ ಅವಕಾಶ ಸದುಪಯೋಗ ಮಾಡಿಕೊಳ್ಳಬೇಕು ಎಂದು ಚುನಾವಣಾಧಿಕಾರಿ ಡಾ. ಎಚ್.ಎಲ್. ನಾಗರಾಜ್ ಕೋರಿದ್ದಾರೆ.

ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು, ಬೂತ್ ಮಟ್ಟದ ಏಜೆಂಟರನ್ನು ನೇಮಿಸಿಕೊಂಡು ಚುನಾವಣಾಧಿಕಾರಿಗಳ ಅನುಮತಿ ಪಡೆದು ಈ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು.

ಆರ್.ಆರ್. ನಗರ ಕ್ಷೇತ್ರದಲ್ಲಿ 678 ಮತಗಟ್ಟೆಗಳಿದ್ದು, ಮತಗಟ್ಟೆಗೆ ಬರಲಾಗದ 80 ವರ್ಷ ಮೇಲ್ಪಟ್ಟ 5,600 ಹಿರಿಯ ನಾಗರಿಕರು, 698 ಅಂಗವಿಕಲ ಮತದಾರರಿಗೆ ಅನುಕೂಲವಾಗುತ್ತಿದೆ ಎಂದು ತಿಳಿಸಿದ್ದಾರೆ.